ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/22/ಸುತ್ತೋಲೆ/2018-19

ದಿನಾಂಕ: 27.10.2018

# ಸುತ್ತೋಲೆ

**ವಿಷಯ:** Vigilance Awareness Week-2018 ನ್ನು ಆಚರಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂ:ಸಿಆಸುಇ/112/ಸೇಲೋಯು/2018 ಬೆಂಗಳೂರು ದಿನಾಂಕ:17.10.2018.

* * * * * *

ಸಾರ್ವಜನಿಕ ಆಡಳಿತದ ಎಲ್ಲಾ ಕ್ಷೇತ್ರಗಳಲ್ಲಿ ಭ್ರಷ್ಟಾಚಾರವನ್ನು ತೊಲಗಿಸಿ, ಉತ್ತಮ ಆಡಳಿತಕ್ಕಾಗಿ ಪಾರದರ್ಶಕ ನೀತಿಗಳನ್ನು ರೂಪಿಸಿ ಅವುಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮತ್ತು ಇಂದಿನ ವ್ಯವಸ್ಥೆಯನ್ನು ಸುಧಾರಿಸಲು ಸಂಬಂಧಪಟ್ಟವರೆಲ್ಲರನ್ನು ಒಗ್ಗೂಡಿಸಿ ಭ್ರಷ್ಟಚಾರದ ವಿರುದ್ಧ ಜಾಗೃತಿ ಮೂಡಿಸಲು ದಿನಾಂಕ:29.10.2018 ರಿಂದ 03.11.2018 ರವರೆಗೆ 'ಜಾಗೃತಿ ಅರಿವು ಸಪ್ತಾಹ' (Vigilance Awareness Week) ಆಚರಿಸುವಂತೆ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಸೂಚಿಸಲಾಗಿದ್ದು, ಅದರಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆ ಹಾಗೂ ಪ್ರತಿಜ್ಞೆಯ ಮಾದರಿ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ, ರವಾನಿಸುತ್ತಾ, ಸದರಿ ಸುತ್ತೋಲೆಯಲ್ಲಿ ತಿಳಿಸಿರುವಂತೆ ತಮ್ಮ ಕಛೇರಿಯ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳಲ್ಲಿ 'ಜಾಗೃತಿ ಅರಿವು ಸಪ್ತಾಹ-2018" (Vigilance Awareness Week-2018) ಆಚರಿಸಲು ಅವಶ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಈ ಸಪ್ತಾಹಕ್ಕೆ ಚಾಲನೆ ನೀಡಲು ಒಂದು ಪ್ರತಿಜ್ಞೆಯನ್ನು ತೆಗೆದುಕೊಂಡು ಆರಂಭಿಸಬೇಕೆಂದು ಸೂಚಿಸಲಾಗಿದೆ.

"ಜಾಗೃತಿ ಅರಿವು ಸಪ್ತಾಹ-2018" ವನ್ನು ಆಚರಿಸಿದ ಬಗ್ಗೆ ಒಂದು ಕ್ರೋಢೀಕೃತ ಅನುಪಾಲನಾ ವರದಿಯನ್ನು ಈ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸುವಂತೆಯೂ ಸಹ ಸೂಚಿಸಲಾಗಿದೆ.

(ಸಹಿ)
ಕಾಲೇಜು ಶಿಕ್ಷಣ ನಿರ್ದೇಶಕರು

**<u>ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.</u>**

ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ತಮ್ಮ ಕಛೇರಿಯ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.

**<u>ಪ್ರತಿಯನ್ನು:</u>**

1) ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು-560001.
2) ~~[illegible]~~ ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು ಇವರ ವೆಬ್‌ಸೈಟ್‌ನಲ್ಲಿ ಅಳವಡಿಸಲು
3) ಕಛೇರಿ ಪ್ರತಿ

# **ಪ್ರತಿಜ್ಞೆ**

ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಅಭಿವೃದ್ಧಿಗೆ ಭ್ರಷ್ಟಾಚಾರವು ಒಂದು ಪ್ರಮುಖ ಅಡಚಣೆಯಾಗಿದೆಯೆಂದು ನಾನು ನಂಬುತ್ತೇನೆ. ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸರ್ಕಾರ, ನಾಗರಿಕರು ಮತ್ತು ಖಾಸಗಿ ವಲಯದಂತಹ ಎಲ್ಲಾ ಪಾಲುದಾರರು ಒಟ್ಟಾಗಿ ಕೆಲಸ ಮಾಡಬೇಕಾಗುತ್ತದೆಂದು ನಾನು ನಂಬುತ್ತೇನೆ.

ಪ್ರತಿ ನಾಗರಿಕನು ಜಾಗರೂಕನಾಗಿದ್ದು, ಎಲ್ಲಾ ಸಮಯದಲ್ಲೂ ಉನ್ನತ ಗುಣಮಟ್ಟದ ಪ್ರಾಮಾಣಿಕತೆ ಮತ್ತು ನಿಷ್ಠೆಗೆ ಬದ್ಧನಾಗಿರಬೇಕೆಂದು ಹಾಗೂ ಭ್ರಷ್ಟಾಚಾರದ ವಿರುದ್ಧ ಹೋರಾಟವನ್ನು ಬೆಂಬಲಿಸಬೇಕೆಂದು ನಾನು ಅರಿತಿದ್ದೇನೆ.

**ಆದ್ದರಿಂದ, ನಾನು ಈ ರೀತಿ ಪ್ರತಿಜ್ಞೆ ಮಾಡುತ್ತೇನೆ :-**

- ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಪ್ರಾಮಾಣಿಕತೆ ಮತ್ತು ಕಾನೂನಿನ ನಿಯಮಗಳನ್ನು ಅನುಸರಿಸುತ್ತೇನೆ;
- ಲಂಚವನ್ನು ಪಡೆಯುವುದಿಲ್ಲ ಹಾಗೂ ನೀಡುವುದೂ ಇಲ್ಲ;
- ಎಲ್ಲಾ ಕಾರ್ಯಗಳನ್ನು ಪ್ರಾಮಾಣಿಕ ಮತ್ತು ಪಾರದರ್ಶಕ ರೀತಿಯಲ್ಲಿ ನಿರ್ವಹಿಸುತ್ತೇನೆ;
- ಸಾರ್ವಜನಿಕ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುತ್ತೇನೆ;
- ವೈಯಕ್ತಿಕ ನಡವಳಿಕೆಯಲ್ಲಿ ನಿಷ್ಠೆ ಪ್ರದರ್ಶಿಸುವ ಮೂಲಕ ಮಾದರಿಯಾಗಿರುತ್ತೇನೆ;
- ಯಾವುದೇ ಭ್ರಷ್ಟಾಚಾರದ ಘಟನೆಯನ್ನು ಸೂಕ್ತ ಸಂಸ್ಥೆಗೆ ವರದಿ ಮಾಡುತ್ತೇನೆ.

*****